**ಓ.ಎಸ್.ನಂಃ 128/2023**

**ಪಿಡಬ್ಲ್ಯೂ–2**

**<u>ಸಾಕ್ಷಿಯನ್ನು ಕರೆಯಿಸಿ ದಿನಾಂಕಃ 12.01.2026 ರಂದು ಪ್ರಮಾಣಿಕರಿಸಲಾಯಿತು.</u>**

**<u>ಪಾಟೀ ಸವಾಲು: ಪ್ರತಿವಾದಿ ಪರ ವಕೀಲರಿಂದಃ</u>**

ವಾದಿ ಮತ್ತು 1ನೇ ಪ್ರತಿವಾದಿ ನಡುವೆ ಆದ ವಿಭಾಗ ಪತ್ರವನ್ನು ನಾನು ನೋಡಿದ್ದೇನೆ. ಸದರಿ ವಿಭಾಗ ಪತ್ರದ ದಿನಾಂಕ ನನಗೆ ಗೊತ್ತಿಲ್ಲ. ಸದರಿ ವಿಭಾಗ ಪತ್ರವನ್ನು ವಾದಿ ನ್ಯಾಯಾಲಯಕ್ಕೆ ಹಾಜರುಪಡಿಸಿದ ಬಗ್ಗೆ ನಾನು ತಿಳಿದುಕೊಂಡಿಲ್ಲ. ನಾಗರಾಜಪ್ಪರವರಿಗೆ ದಾವಾ ಸ್ವತ್ತು ಹೇಗೆ ಬಂತು ಎಂಬ ಬಗ್ಗೆ ದಾಖಲೆ ನೋಡಿದ್ದೇನೆ. ಓ.ಎಸ್.ಸಂಖ್ಯೆ 12/2023 ನ್ನು ವಾದಿಯ ಸಹೋದರಿಯರು ವಾದಿ ಮತ್ತು ಪ್ರತಿವಾದಿಗಳ ವಿರುದ್ಧ ಹೂಡಿರುವ ಬಗ್ಗೆ ನನಗೆ ಮಾಹಿತಿ ಇಲ್ಲ. ವಾದಿ ಸದರಿ ದಾವೆ ಬಗ್ಗೆ ಮಾಹಿತಿ ನೀಡಿಲ್ಲ. ದಾವಾ ಸ್ವತ್ತಿಗೆ ವಾದಿ ಮತ್ತು ಪ್ರತಿವಾದಿಗಳ ನಡುವೆ ವಿಭಾಗವಾಗಿರುವ ಬಗ್ಗೆ ಯಾವುದೆ ದಾಖಲೆ ಇಲ್ಲ ಎಂದರೆ ಸರಿಯಲ್ಲ. ನಾಗರಾಜಪ್ಪನವರಿಗೆ ದಾವಾ ಸ್ವತ್ತು ಬಂದ ಬಗ್ಗೆ ದಾಖಲೆ ನೋಡಿಲ್ಲ ಎಂದರೆ ಸರಿಯಲ್ಲ. ವಾದಿ ದಾವಾ ಸ್ವತ್ತು ತಮಗೆ ಹೇಗೆ ಬಂತು ಎಂಬ ಬಗ್ಗೆ ಹಕ್ಕಿನ ದಾಖಲಾತಿಯನ್ನು ನನಗೆ ತೋರಿಸಿಲ್ಲ. ವಾದಿ ಮತ್ತು ವಾದಿಯ ಸ್ವತ್ತಿನ ಬಗ್ಗೆ ನನಗೆ ಗೊತ್ತಿದ್ದ ಕಾರಣ ಪ್ರಮಾಣ ಪತ್ರ ಸಲ್ಲಿಸಿದ್ದೇನೆ. ದಾವಾ ಸ್ವತ್ತಿನ ಬಗ್ಗೆ ನಾನು ಸಂಪೂರ್ಣ ಮಾಹಿತಿ ತಿಳಿದುಕೊಂಡಿಲ್ಲ ಎಂದರೆ ಸರಿಯಲ್ಲ. ವಾದಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

**(ಗಿರೀಶ ಆರ್.ಬಿ)**

ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ

ಗುಂಡ್ಲುಪೇಟೆ